# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ಲೋಕಾಯುಕ್ತ ಸಂಸ್ಥೆಯ ಪ್ರಧಾನ ಕಛೇರಿಯ ಉಪಯೋಗಕ್ಕಾಗಿ ಕೊಠಡಿಗಳನ್ನು ಹಂಚಿಕೆ ಮಾಡುವ ಬಗ್ಗೆ.

*****

**ಓದಲಾಗಿದೆ:-**

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 147 ಡಿಬಿಎಂ 2020, ದಿನಾಂಕ: 02.02.2021

ಪ್ರಸ್ತಾವನೆ:

ಮೇಲೆ ಓದಲಾದ ಸರ್ಕಾರಿ ಆದೇಶದಲ್ಲಿ, ಕರ್ನಾಟಕ ಲೋಕಾಯುಕ್ತ ಸಂಸ್ಥೆಗೆ ಬಹುಮಹಡಿ ಕಟ್ಟಡದ 01ನೇ ಹಂತದ 01ನೇ ಮಹಡಿಯಲ್ಲಿ 2120 ಚದರ ಅಡಿ ಸ್ಥಳಾವಕಾಶವನ್ನು ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಆಯುಕ್ತಾಲಯ(ಐ.ಸಿ.ಪಿ.ಎಸ್. ಸೇರಿದಂತೆ)ಕ್ಕೆ ಬಹುಮಹಡಿ ಕಟ್ಟಡದ 1ನೇ ಹಂತದ 2ನೇ ಮಹಡಿಯಲ್ಲಿ 1200 ಚದರ ಅಡಿ ಸ್ಥಳಾವಕಾಶವನ್ನು ಬದಲಿಯಾಗಿ ಹಂಚಿಕೆ ಮಾಡಿ ಆದೇಶಿಸಲಾಗಿತ್ತು. ಆದರೆ, ಲೋಕಾಯುಕ್ತಕ್ಕೆ ಹಂಚಿಕೆ ಮಾಡಿರುವ ಬಹುಮಹಡಿ ಕಟ್ಟಡದ 01ನೇ ಹಂತದ 01ನೇ ಮಹಡಿಯಲ್ಲಿನ ಭಾಗಶ: ಸ್ಥಳಾವಕಾಶದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಕೆಲವು ಶಾಖೆಗಳು ಕಾರ್ಯನಿರ್ವಹಿಸುತ್ತಿರುವುದರಿಂದ, ಲೋಕಾಯುಕ್ತ ಸಂಸ್ಥೆಯ ಕಾರ್ಯನಿರ್ವಹಣೆಯ ಗೌಪ್ಯತೆಗೆ ಧಕ್ಕೆ ಉಂಟಾಗುತ್ತಿರುವುದಾಗಿ ಉಪ ಲೋಕಾಯುಕ್ತರು, ಲೋಕಾಯುಕ್ತ ಸಂಸ್ಥೆ ಇವರು ತಿಳಿಸಿರುವುದರಿಂದ, ಈ ಬಗ್ಗೆ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ: ಸಿಆಸುಇ 147 ಡಿಬಿಎಂ 2020,**
**ಬೆಂಗಳೂರು, ದಿನಾಂಕ: 04.03.2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 147 ಡಿಬಿಎಂ 2020, ದಿನಾಂಕ: 02.02.2021ರಲ್ಲಿ ಕರ್ನಾಟಕ ಲೋಕಾಯುಕ್ತ ಸಂಸ್ಥೆಗೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಆಯುಕ್ತಾಲಯ(ಐ.ಸಿ.ಪಿ.ಎಸ್. ಸೇರಿದಂತೆ)ಕ್ಕೆ ಬದಲಿಯಾಗಿ ಸ್ಥಳಾವಕಾಶವನ್ನು ಹಂಚಿಕೆ ಮಾಡಿರುವ ಆದೇಶವನ್ನು ಮಾರ್ಪಡಿಸಿ, ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಈ ಕೆಳಕಂಡಂತೆ ಸ್ಥಳಾವಕಾಶವನ್ನು ಹಂಚಿಕೆ ಮಾಡಿ ಆದೇಶಿಸಿದೆ.

| ಕ್ರ.ಸಂ. | ಇಲಾಖೆ | ಹಂಚಿಕೆ ಮಾಡಿರುವ ಸ್ಥಳಾವಕಾಶ |
|---|---|---|
| 1 | ಕರ್ನಾಟಕ ಲೋಕಾಯುಕ್ತ ಸಂಸ್ಥೆ | ಬಹುಮಹಡಿ ಕಟ್ಟಡದ 01ನೇ ಹಂತದ 01ನೇ ಮಹಡಿಯಲ್ಲಿನ ಸಂಪೂರ್ಣ ಸ್ಥಳಾವಕಾಶ |
| 2 | ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಆಯುಕ್ತಾಲಯ (ಐ.ಸಿ.ಪಿ.ಎಸ್. ಸೇರಿದಂತೆ) | ಬಹುಮಹಡಿ ಕಟ್ಟಡದ 01ನೇ ಹಂತದ 02ನೇ ಮಹಡಿಯಲ್ಲಿನ ಸಂಪೂರ್ಣ ಸ್ಥಳಾವಕಾಶ |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Signed by Raveendra K
Date: 04.03.2021 11:24:05
Reason: Approved

(ಕೆ. ರವೀಂದ್ರ)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಆಸುಇ (ಕಾರ್ಯಕಾರಿ)

ಗೆ:

1. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು
2. ಆಯುಕ್ತರು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬಹುಮಹಡಿಗಳ ಕಟ್ಟಡ.
3. ಸರ್ಕಾರದ ಕಾರ್ಯದರ್ಶಿ, ಸಿಆಸು ಇಲಾಖೆ.
4. ಸರ್ಕಾರದ ಮುಖ್ಯ ಕಾರ್ಯದರ್ಶಿಯರ ಆಪ್ತ ಕಾರ್ಯದರ್ಶಿಯವರು, ವಿಧಾನಸೌಧ.

5. ಸರ್ಕಾರದ ಜಂಟಿ ಕಾರ್ಯದರ್ಶಿ, ಸಿಆಸು ಇಲಾಖೆ, ವಿಧಾನಸೌಧ.
6. ಸರ್ಕಾರದ ಉಪ ಕಾರ್ಯದರ್ಶಿ, ಸಿಆಸುಇ (ಕಾರ್ಯಕಾರಿ), ವಿಧಾನಸೌಧ.
7. ಕಾರ್ಯಪಾಲಕ ಅಭಿಯಂತರರು, ನಂ.1, ಕಟ್ಟಡಗಳ ವಿಭಾಗ, ಲೋಕೋಪಯೋಗಿ ಇಲಾಖೆ, ಎಸ್.ಜೆ.ಪಿ. ಆವರಣ, ಬೆಂಗಳೂರು.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ನಂ.3, ಕಟ್ಟಡಗಳ ಉಪ ವಿಭಾಗ, ಲೋಕೋಪಯೋಗಿ ಇಲಾಖೆ, ಬಹುಮಹಡಿಗಳ ಕಟ್ಟಡ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ನಂ.5, ವಿದ್ಯುತ್ ವಿಭಾಗ, ಲೋಕೋಪಯೋಗಿ ಇಲಾಖೆ, ವಿಧಾನಸೌಧ.
10. ಶಾಖಾಧಿಕಾರಿ, ಸಿಆಸುಇ(ಕಾರ್ಯಕಾರಿ-ಬಿ), ವಿಧಾನಸೌಧ.
11. ಭದ್ರತಾಧಿಕಾರಿ/ಮೇಲ್ವಿಚಾರಕರು, ಸಿಆಸುಇ(ಕಾರ್ಯಕಾರಿ-ಎ), ಬಹುಮಹಡಿಗಳ ಕಟ್ಟಡ.
12. ರಕ್ಷಾ ಕಡತ/ಕಚೇರಿ ಪ್ರತಿ

/112260/2021

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ಲೋಕಾಯುಕ್ತ ಸಂಸ್ಥೆಯ ಪ್ರಧಾನ ಕಛೇರಿಯ ಉಪಯೋಗಕ್ಕಾಗಿ ಕೊಠಡಿಗಳನ್ನು ಹಂಚಿಕೆ ಮಾಡುವ ಬಗ್ಗೆ.

*****

**ಓದಲಾಗಿದೆ:-**

1. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 147 ಡಿಬಿಎಂ 2020, ದಿನಾಂಕ: 04.03.2021.
2. ನಿರ್ದೇಶಕರು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಇವರ ಪತ್ರ ಸಂಖ್ಯೆ: ಮಮಅಇ:ಸ್ತ್ರೀಮರ:ಉಗ್ರಾಣ-18/11-15/16-17 ರಿಂದ 2019-20, ದಿನಾಂಕ: 30.06.2021.
3. ಸರ್ಕಾರದ ಉಪ ಕಾರ್ಯದರ್ಶಿ (ಆಡಳಿತ-1), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಇವರ ಅನಧಿಕೃತ ಟಿಪ್ಪಣಿ ಸಂಖ್ಯೆ: ಗ್ರಾಅಪ 42 ಆರ್‌ಐ 2021, ದಿನಾಂಕ: 25.03.2021.

**ಪ್ರಸ್ತಾವನೆ:**

ಬಹುಮಹಡಿ ಕಟ್ಟಡದ 01ನೇ ಹಂತದ 01ನೇ ಮಹಡಿಯಲ್ಲಿನ ಸಂಪೂರ್ಣ ಸ್ಥಳಾವಕಾಶವನ್ನು ಕರ್ನಾಟಕ ಲೋಕಾಯುಕ್ತ ಸಂಸ್ಥೆಗೆ ಮೇಲೆ (1)ರಲ್ಲಿ ಓದಲಾದ ಆದೇಶದಲ್ಲಿ ಹಂಚಿಕೆ ಮಾಡಿ ಆದೇಶಿಸಿರುವುದರಿಂದ, ಬಹುಮಹಡಿ ಕಟ್ಟಡದ ಒಂದನೇ ಮಹಡಿಯಲ್ಲಿನ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ನಿರ್ದೇಶನಾಲಯದ ಉಗ್ರಾಣ ಮತ್ತು ಅಭಿಲೇಖಾಲಯವನ್ನು ಕೂಡಲೇ ತೆರವುಗೊಳಿಸುವಂತೆ ಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ ಸಂಸ್ಥೆ ಇವರು ಸೂಚಿಸಿದ್ದು, ಉಗ್ರಾಣ ಮತ್ತು ಅಭಿಲೇಖಾಲಯಗಳಿಗೆ ಸೂಕ್ತ ಸ್ಥಳಾವಕಾಶ ಒದಗಿಸುವಂತೆ ಮೇಲೆ (2)ರಲ್ಲಿ ಓದಲಾದ ಪತ್ರದಲ್ಲಿ ನಿರ್ದೇಶಕರು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರು ಕೋರಿರುತ್ತಾರೆ.

29 JUL 2021

ಮುಂದುವರೆದು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧೀನದಲ್ಲಿ ಬರುವ ಕರ್ನಾಟಕ ವಿಕಾಸ ಮಾಸ ಪತ್ರಿಕೆಯ ದಾಖಲೆ ಹಾಗೂ ಕಡತಗಳನ್ನು ಬಹುಮಹಡಿ ಕಟ್ಟಡದ ನೆಲಮಹಡಿಯಲ್ಲಿರುವ ಕೊಠಡಿ ಸಂಖ್ಯೆ: 19ರಲ್ಲಿ ಇರಿಸಲಾಗಿದ್ದು, ಪ್ರಸ್ತುತ ಸದರಿ ಕೊಠಡಿಯನ್ನು ತೆರವುಗೊಳಿಸುವಂತೆ ಸೂಚಿಸಿರುವುದರಿಂದ, ಸಿಆಸು ಇಲಾಖೆಯ ವಶದಲ್ಲಿರುವ ಬಹುಮಹಡಿ ಕಟ್ಟಡದ 3ನೇ ಗೇಟ್‌ನ 2ನೇ ಮಹಡಿಯ ಕೊಠಡಿ ಸಂಖ್ಯೆ: 201 ಅನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವಶಕ್ಕೆ ನೀಡಿದಲ್ಲಿ, ಕೊಠಡಿ ಸಂಖ್ಯೆ: 19 ಅನ್ನು ಸಿಆಸು ಇಲಾಖೆಯ ವಶಕ್ಕೆ ನೀಡಲಾಗುವುದೆಂದು ಮೇಲೆ (3)ರಲ್ಲಿ ಓದಲಾದ ಅನಧಿಕೃತ ಟಿಪ್ಪಣಿಯಲ್ಲಿ ಕೋರಿರುತ್ತಾರೆ.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ನಿರ್ದೇಶನಾಲಯ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗಳ ಕೋರಿಕೆಗಳನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ: ಸಿಆಸುಇ 147 ಡಿಬಿಎಂ 2020,**
**ಬೆಂಗಳೂರು, ದಿನಾಂಕ:28.07.2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ನಿರ್ದೇಶನಾಲಯದ ಉಗ್ರಾಣ ಮತ್ತು ಅಭಿಲೇಖಾಲಯಕ್ಕೆ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಈ ಕೆಳಕಂಡಂತೆ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಬದಲಿಯಾಗಿ ಹಂಚಿಕೆ ಮಾಡಿ ಆದೇಶಿಸಿದೆ.

1. ಬಹುಮಹಡಿ ಕಟ್ಟಡದ 01ನೇ ಹಂತದ 01ನೇ ಮಹಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ನಿರ್ದೇಶನಾಲಯದ ಉಗ್ರಾಣ ಮತ್ತು ಅಭಿಲೇಖಾಲಯಕ್ಕೆ ಬಹುಮಹಡಿ ಕಟ್ಟಡದ 01ನೇ ಹಂತದ ನೆಲಮಹಡಿಯಲ್ಲಿ ಪಶುಸಂಗೋಪನಾ ಇಲಾಖೆಯಿಂದ ತೆರವಾದ ಕೊಠಡಿ ಸಂಖ್ಯೆ: 15 ಅನ್ನು ಬದಲಿಯಾಗಿ ಹಂಚಿಕೆ ಮಾಡಿದೆ.

2. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಕರ್ನಾಟಕ ವಿಕಾಸ ಮಾಸ ಪತ್ರಿಕೆ ವಿಭಾಗದ ಸುಪರ್ದಿಯಲ್ಲಿರುವ ಬಹುಮಹಡಿ ಕಟ್ಟಡದ 01ನೇ ಹಂತದ ನೆಲಮಹಡಿಯಲ್ಲಿನ ಕೊಠಡಿ

ಸಂಖ್ಯೆ: 19 ಅನ್ನು ಸಿಆಸು ಇಲಾಖೆಯ ವಶಕ್ಕೆ ನೀಡುವ ಷರತ್ತಿಗೊಳಪಟ್ಟು, ಬಹುಮಹಡಿ ಕಟ್ಟಡದ 3ನೇ ಗೇಟ್‌ನ 2ನೇ ಮಹಡಿಯ ಕೊಠಡಿ ಸಂಖ್ಯೆ: 201 ಅನ್ನು ಬದಲಿಯಾಗಿ ಹಂಚಿಕೆ ಮಾಡಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

28/7

(ಕೆ.ರವೀಂದ್ರ)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಆಸುಇ (ಕಾರ್ಯಕಾರಿ)

ಗೆ:

1. ಆಯುಕ್ತರು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬಹುಮಹಡಿಗಳ ಕಟ್ಟಡ.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು
3. ಸರ್ಕಾರದ ಕಾರ್ಯದರ್ಶಿ, ಸಿಆಸು ಇಲಾಖೆ.
4. ಸರ್ಕಾರದ ಮುಖ್ಯ ಕಾರ್ಯದರ್ಶಿಯರ ಆಪ್ತ ಕಾರ್ಯದರ್ಶಿಯವರು, ವಿಧಾನಸೌಧ.
5. ಸರ್ಕಾರದ ಅಪರ ಕಾರ್ಯದರ್ಶಿ, ಸಿಆಸು ಇಲಾಖೆ, ವಿಧಾನಸೌಧ.
6. ಸರ್ಕಾರದ ಉಪ ಕಾರ್ಯದರ್ಶಿ, ಸಿಆಸುಇ (ಕಾರ್ಯಕಾರಿ), ವಿಧಾನಸೌಧ.
7. ಸರ್ಕಾರದ ಉಪ ಕಾರ್ಯದರ್ಶಿ(ಆಡಳಿತ-1), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ.
8. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, 1ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು
9. ಕಾರ್ಯಪಾಲಕ ಅಭಿಯಂತರರು, ನಂ. 1 , ಕಟ್ಟಡಗಳ ವಿಭಾಗ, ಲೋಕೋಪಯೋಗಿ ಇಲಾಖೆ, ಎಸ್.ಜೆ.ಪಿ. ಆವರಣ, ಬೆಂಗಳೂರು.
10. ಸಹಾಯಕ ಕಾರ್ಯಪಾಲಕ ಅಭಿಯಂತರರು, ನಂ. 3 , ಕಟ್ಟಡಗಳ ಉಪ ವಿಭಾಗ, ಲೋಕೋಪಯೋಗಿ ಇಲಾಖೆ, ಬಹುಮಹಡಿಗಳ ಕಟ್ಟಡ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು, ನಂ.5 , ವಿದ್ಯುತ್ ವಿಭಾಗ, ಲೋಕೋಪಯೋಗಿ ಇಲಾಖೆ, ವಿಧಾನಸೌಧ.
12. ಶಾಖಾಧಿಕಾರಿ, ಸಿಆಸುಇ(ಕಾರ್ಯಕಾರಿ-ಬಿ), ವಿಧಾನಸೌಧ.
13. ಭದ್ರತಾಧಿಕಾರಿ / ಮೇಲ್ವಿಚಾರಕರು, ಸಿಆಸುಇ(ಕಾರ್ಯಕಾರಿ-ಬಿ), ಬಹುಮಹಡಿಗಳ ಕಟ್ಟಡ.
14. ರಕ್ಷಾ ಕಡತ/ಕಚೇರಿ ಪ್ರತಿ